# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 450 |
| ಮಾನ್ಯ ಸದಸ್ಯರ ಹೆಸರು | | ಶ್ರೀ ಮರಿತಿಬ್ಬೇಗೌಡ |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 13-12-2018 |
| ಪ್ರಶ್ನೆ | | ಉತ್ತರ |
| (ಅ) | ಪದವಿ, ಬಿ.ಇ., ಹಾಗೂ ವಿಶ್ವವಿದ್ಯಾಲಯಗಳ ಬೋಧಕರಿಗೆ ಕೇಂದ್ರ ಸರ್ಕಾರ ಈಗಾಗಲೇ 7ನೇ ವೇತನವನ್ನು ಜಾರಿಗೊಳಿಸಲಾಗಿದ್ದು, ಕರ್ನಾಟಕ ರಾಜ್ಯದಲ್ಲಿ 7ನೇ ವೇತನವನ್ನು ಜಾರಿಗೊಳಿಸಲು ವಿಳಂಬ ಆಗಿರುವುದಕ್ಕೆ ಕಾರಣಗಳೇನು; | ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯದ ದಿನಾಂಕ: 02-11-2017ರ ಪತ್ರದಲ್ಲಿ ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ಬೋಧಕ ಸಿಬ್ಬಂದಿಗಳಿಗೆ ಯು.ಜಿ.ಸಿಯ 7ನೇ ವೇತನ ಶ್ರೇಣಿಯನ್ನು ಜಾರಿಗೊಳಿಸಲು ಅನುಮೋದನೆ ನೀಡಿರುತ್ತದೆ. ಅದರಂತೆ, ಪರಿಷ್ಕೃತ ಯು.ಜಿ.ಸಿಯ 7ನೇ ವೇತನ ಶ್ರೇಣಿಯನ್ನು ಅನುಷ್ಠಾನಗೊಳಿಸಿದ್ದಲ್ಲಿ, ಸರ್ಕಾರಕ್ಕೆ ಉಂಟಾಗುವ ಆರ್ಥಿಕ ಹೊರೆಯ ಬಗ್ಗೆ ಪರಿಶೀಲಿಸಲು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ವರದಿಯನ್ನು ನೀಡಿದ್ದು, ಆರ್ಥಿಕ ಇಲಾಖೆಯ ಸಹಮತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಪ್ರಸ್ತುತ ಆರ್ಥಿಕ ಇಲಾಖೆಯ ಅಭಿಪ್ರಾಯವನ್ನು ನಿರೀಕ್ಷಿಸಲಾಗುತ್ತಿದೆ. |
| (ಆ) | ಯಾವ ಕಾಲಮಿತಿಯಲ್ಲಿ 7ನೇ ವೇತನ ಸಮಿತಿಯ ಶಿಫಾರಸ್ಸುಗಳನ್ನು ಜಾರಿಗೊಳಿಸಲಾಗುವುದು; | |
| (ಇ) | ದಿನಾಂಕ: 01-01-2006ರಿಂದ ನೀಡಬೇಕಾಗಿರುವ ಯು.ಜಿ.ಸಿ. ಬಾಕಿ ವೇತನದ ಒಟ್ಟು ಮೊತ್ತವೆಷ್ಟು; | ಯುಜಿಸಿ/ಎಐಸಿಟಿಇಯ ಪರಿಷ್ಕೃತ 6ನೇ ವೇತನದಿಂದ ಉಂಟಾಗುವ ಯುಜಿಸಿಯ ಬೇಬಾಕಿಯನ್ನು ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳ ಸಿಬ್ಬಂದಿಗಳಿಗೆ ರೂ. 1086.00ಕೋಟಿಗಳನ್ನು ಇದುವರೆವಿಗೂ ಬಿಡುಗಡೆ ಮಾಡಲಾಗಿದ್ದು, ಅಂದಾಜು ರೂ. 179.05 ಕೋಟಿಗಳನ್ನು ಬಿಡುಗಡೆ ಮಾಡಬೇಕಾಗಿರುತ್ತದೆ. |
| (ಈ) | ಬಾಕಿ ಮೊತ್ತವನ್ನು ಪಾವತಿಸಲು ವಿಳಂಬ ಉಂಟಾಗಲು ಕಾರಣಗಳೇನು; | ಯು.ಜಿ.ಸಿ. ಬಾಕಿ ವೇತನವು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರವು 80:20 ಅನುಪಾತದಲ್ಲಿ ಭರಿಸಬೇಕಾಗುತ್ತದೆ. ರಾಜ್ಯ ಸರ್ಕಾರವು ಬಿಡುಗಡೆ ಮಾಡಿರುವ ಬೇಬಾಕಿ ಮೊತ್ತವನ್ನು ಮರು ಪಾವತಿಸುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಕೇಂದ್ರ ಸರ್ಕಾರದಿಂದ ಮರುಪಾವತಿಯಾದ ನಂತರ ಅರ್ಹ ಸಿಬ್ಬಂದಿಗಳಿಗೆ ಬಾಕಿ ಮೊತ್ತವನ್ನು ಬಿಡುಗಡೆ ಮಾಡಲಾಗುವುದು. |
| (ಉ) | ಯಾವ ಕಾಲಮಿತಿಯಲ್ಲಿ ಬಾಕಿ ವೇತನವನ್ನು ಪಾವತಿಸಲಾಗುವುದು? | |

ಸಂಖ್ಯೆ: ಇಡಿ 412 ಯುಎನ್ಇ 2018

(ಜಿ.ಟಿ. ದೇವೇಗೌಡ)
ಉನ್ನತ ಶಿಕ್ಷಣ ಸಚಿವರು.